# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 190

ಸದಸ್ಯರ ಹೆಸರು : ಶ್ರೀ ಬಿ.ಎಂ.ಫಾರೂಖ್

ಉತ್ತರಿಸಬೇಕಾದ ದಿನಾಂಕ : 04.12.2023

ಉತ್ತರಿಸುವ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿದ್ಯಾರ್ಥಿಗಳ ಸುರಕ್ಷತೆಗಾಗಿ ಎಲ್ಲಾ ಸರ್ಕಾರಿ ಹಾಗೂ ಇತರ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿ-ವಿದ್ಯಾರ್ಥಿನಿ ನಿಲಯಗಳಲ್ಲಿ ಕ್ಯಾಮರಾ ಕಣ್ಗಾವಲು (ಸಿಸಿಟಿವಿ) ಅತ್ಯಂತ ಅಗತ್ಯ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಇತ್ತೀಚಿನ ದಿನಗಳಲ್ಲಿ ಅಪರಾಧ ಅನೈತಿಕ ಚಟುವಟಿಕೆಗಳು ಸರಾಸರಿ ಹೆಚ್ಚುತ್ತಿರುವುದರಿಂದ ಸಿಸಿಟಿವಿ ಜಾಲ ತೀರಾ ಅವಶ್ಯಕವಾಗಿದ್ದು ಸರ್ಕಾರ ಈ ನಿಟ್ಟಿನಲ್ಲಿ ಯಾವ ಯೋಜನೆಗಳನ್ನು ಹಮ್ಮಿ ಕೊಂಡಿದೆ: (ವಿವರ ನೀಡುವುದು) | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1462 ಹಾಗೂ ಪ್ರೌಢ ಶಾಲೆಗಳಲ್ಲಿ 2200 ಒಟ್ಟಾರೆಯಾಗಿ 3662 ಸಿಸಿಟಿವಿ ಗಳನ್ನು ಮತ್ತು ಸರ್ಕಾರಿ ಅನುದಾನಿತ ಶಾಲೆಗಳಲ್ಲಿ 3914 ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ.<br>1231 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ.<br>ಸಮಗ್ರ ಶಿಕ್ಷಣ ಕರ್ನಾಟಕದಡಿ ಕಾರ್ಯ ನಿರ್ವಹಿಸುತ್ತಿರುವ 74 ಕಸ್ತೂರಿಬಾ ಗಾಂಧಿ ಬಾಲಕಿಯರ ವಿದ್ಯಾಲಯ ವಸತಿ ಶಾಲೆ, 73 ಕಸ್ತೂರಿಬಾ ಗಾಂಧಿ ಬಾಲಕಿಯರ ವಿದ್ಯಾಲಯ ವಸತಿ ನಿಲಯ ಹಾಗೂ 72 ಕರ್ನಾಟಕ ಕಸ್ತೂರಿಬಾ ಗಾಂಧಿ ಬಾಲಕಿಯರ ವಿದ್ಯಾಲಯಗಳ ವಸತಿನಿಲಯಗಳಲ್ಲಿ ಸಿಸಿಟಿವಿ ಕ್ಯಾಮರಾವನ್ನು ಅಳವಡಿಸಲಾಗಿದೆ. |
| ಇ) | ವಿದ್ಯಾರ್ಥಿ- ಭೋಧಕರ ಸುರಕ್ಷತೆ ಶಿಕ್ಷಣ ಸಂಸ್ಥೆಗಳ ಆವರಣದ ನೈರ್ಮಲ್ಯ ಪಾವಿತ್ರ್ಯತೆಯನ್ನು ಕಾಪಾಡಲು ಈ ಯೋಜನೆಗಳನ್ನು ಯಾವ ಕಾಲಮಿತಿಯಲ್ಲಿ ಕಾರ್ಯರೂಪಕ್ಕೆ ತರಲಾಗುವುದು? | ವಿದ್ಯಾರ್ಥಿ-ಬೋಧಕರ ಸುರಕ್ಷತೆ, ಶಿಕ್ಷಣ ಸಂಸ್ಥೆಗಳ ಆವರಣದ ನೈರ್ಮಲ್ಯ ಪಾವಿತ್ರ್ಯತೆಯನ್ನು ಕಾಪಾಡಲು ಸಮಗ್ರ ಶಿಕ್ಷಣ ಕರ್ನಾಟಕದಡಿಯಲ್ಲಿ ರಾಜ್ಯದ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಶಾಲಾ ಅನುದಾನವನ್ನು ಬಿಡುಗಡೆ ಗೊಳಿಸಲಾಗುತ್ತದೆ. ಅವುಗಳಲ್ಲಿ ಶೇಕಡಾ 10%ರಷ್ಟು ಅನುದಾನವನ್ನು ಸ್ವಚ್ಛತಾ ಕಾರ್ಯಗಳಿಗೆ ವಿನಿಯೋಗಿಸಲು ಸೂಚಿಸಲಾಗಿದೆ.<br>ರಾಜ್ಯದ ಸರ್ಕಾರಿ ಶಾಲಾ & ಕಾಲೇಜುಗಳ ನೈರ್ಮಲ್ಯ & ಪ್ರಾವಿತ್ರ್ಯತೆಯನ್ನು ಕಾಪಾಡಲು ಪ್ರತಿವರ್ಷ ಶಾಲಾ ನಿರ್ವಹಣಾ ವೆಚ್ಚವನ್ನು ಒದಗಿಸಲಾಗುತ್ತಿದೆ. |

| | | |
|---|---|---|
| | | ಶಾಲಾ & ಕಾಲೇಜುಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅಳವಡಿಸಿಕೊಂಡು ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br>ಮೇಲ್ಕಂಡ ಎಲ್ಲಾ ಯೋಜನೆಗಳು ಇಲಾಖೆಯಲ್ಲಿ ಈಗಾಗಲೇ ಜಾರಿಯಲ್ಲಿರುತ್ತದೆ. |

ಸಂಖ್ಯೆ :ಇಪಿ 108 ಇಜಿಓವಿ 2023

**( ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು